ಬಸವರಾಜ ಎಸ್. ಹೊರಟ್ಟಿ
ಸಭಾಪತಿ
ಕರ್ನಾಟಕ ವಿಧಾನ ಪರಿಷತ್ತು

**BASAVARAJA S. HORATTI**
**Chairman**
**Karnataka Legislative Council**

Off. Tel : 2225 9112
2225 8575 / 2203 3325
Fax : 2225 2068
ಕೊಠಡಿ ಸಂಖ್ಯೆ: 117, ಒಂದನೇ ಮಹಡಿ
ವಿಧಾನ ಸೌಧ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು – 560 001
Room No. 117, 1st Floor, Vidhana Soudha
Dr. B.R. Ambedkar Veedhi
Bengaluru - 560 001
E-mail : chairmanklc.uh@gmail.com

ಸಂಖ್ಯೆ:ಕವಿಪ:ಸಕ: 3116 :2025

ದಿನಾಂಕ.08.09.2025

ಮಾನ್ಯ ಸಭಾಧ್ಯಕ್ಷರೇ,

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕರ್ನಾಟಕ ವಿಧಾನ ಮಂಡಲದಲ್ಲಿ **ಕರ್ನಾಟಕ ವಿಧಾನ ಪರಿಷತ್ತು** ಮತ್ತು **ಕರ್ನಾಟಕ ವಿಧಾನ ಸಭೆ** ಒಂದೇ ನಾಣ್ಯದ ಎರಡು ಮುಖಗಳು ಇದ್ದಂತೆ ಎಂದು ನನ್ನ ಅಭಿಪ್ರಾಯ ಹಾಗೂ ತಮ್ಮ ಅಭಿಪ್ರಾಯವು ಆಗಿದೆ ಎಂದು ಭಾವಿಸಿರುತ್ತೇನೆ.

ದ್ವಿಸದನ ಇರುವ ರಾಜ್ಯದಲ್ಲಿ ವಿಧಾನ ಮಂಡಲದಿಂದ ನಡೆಯುವ ಸಚಿವಾಲಯದ ಕಛೇರಿ ಕಾರ್ಯಕ್ರಮಗಳು ಸಹ ಇದೇ ದೃಷ್ಟಿಯಲ್ಲಿ ಹಾಗೂ ದಿಕ್ಕಿನಲ್ಲಿ ಸಾಗಬೇಕು ಆದರೆ ಇತ್ತೀಚಿನ ದಿನಗಳಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯಾದ ನನ್ನನ್ನು ಸೌಜನ್ಯಕ್ಕಾದರು ಅಧಿಕೃತ ಕಾರ್ಯಕ್ರಮದ ಬಗ್ಗೆ ರೂಪರೇಷಗಳನ್ನು ಸಿದ್ದಪಡಿಸಲು ಸಂಪರ್ಕಿಸದೆ ಏಕಪಕ್ಷಿಯವಾಗಿ ನಿರ್ಧಾರ ತೆಗೆದುಕೊಳ್ಳುವುದು ಅತ್ಯಂತ ಬೇಸರದ ಸಂಗತಿಯಾಗಿದೆ. ಉದಾಹರಣೆಗೆ ಇತ್ತೀಚೆಗೆ ವಿಧಾನಸೌಧದ ಆವರಣದಲ್ಲಿ ತಾವು ಪುಸ್ತಕ ಮೇಳವನ್ನು ಆಯೋಜಿಸಿದ್ದು, ವಿಧಾನಸೌಧ ಕಟ್ಟಡಕ್ಕೆ ಲೇಸರ್ ದೀಪ ಅಳವಡಿಸುವ ಯೋಜನೆ, 11 ನೇ ಸಿಪಿಎ ಕಾಮನ್‌ವೆಲ್ತ್ ಪಾರ್ಲಿಮೆಂಟರಿ ಅಸೋಷಿಯೇಷನ್, ಭಾರತ ವಲಯದ ಸಮ್ಮೇಳನ ಆಯೋಜನೆ ಬಗ್ಗೆ ಮೇಲಿನ ಕಾರ್ಯಕ್ರಮಗಳ ರೂಪರೇಷೆಗಳನ್ನು ಮಾಡುವಲ್ಲಿ ನನ್ನನ್ನು ಸೌಜನ್ಯಕ್ಕಾದರು ಸಂಪರ್ಕಿಸಿ ಸಲಹೆ ಸೂಚನೆ ಕೇಳದೆ ಮುಂದುವರೆದು ಸದರಿ ಕಾರ್ಯಕ್ರಮದ ಬಗ್ಗೆ ಪತ್ರಿಕಾ ಗೋಷ್ಠಿಯನ್ನು ಏಕಪಕ್ಷಿಯವಾಗಿ ನಡೆಸುತ್ತಿರುವುದು ನಾನು ಮಾಧ್ಯಮಗಳ ಮೂಲಕ ಗಮನಿಸಿರುವೆ. ಇದರ ಪರಿಣಾಮವಾಗಿ ನನ್ನ ಸುದೀರ್ಘ ರಾಜಕೀಯ ಹಿನ್ನಲೆ ಹಾಗೂ ಅನ್ಯ ರಾಜ್ಯಗಳ ಪೀಠಾಸೀನಾಧಿಕಾರಿಗಳ ನಿಕಟ ಸಂಪರ್ಕದಿಂದ ಹೊರ ರಾಜ್ಯದ ವಿಧಾನ ಪರಿಷತ್ ಹಾಗೂ ವಿಧಾನಸಭೆಯ ಪೀಠಾಸೀನಾಧಿಕಾರಿಗಳು, ಶಾಸಕರು ಹಾಗೂ ಗಣ್ಯರುಗಳೊಂದಿಗೆ 11 ನೇ ಸಿಪಿಎ ಕಾಮನ್‌ವೆಲ್ತ್ ಪಾರ್ಲಿಮೆಂಟರಿ ಅಸೋಷಿಯೇಷನ್‌ಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳು ಹಾಗೂ ಆತ್ಮೀಯ ಮಾಹಿತಿ ವಿನಿಮಯ ಮಾಡುವಲ್ಲಿ ಮುಜುಗರ ಉಂಟಾಗುತ್ತಿದೆ.

ಮುಂದುವರೆದು, ಇತ್ತೀಚೆಗೆ ತಾವು ಬಾರ್ಬಡೊಸ್ ನಲ್ಲಿ ನಡೆಯುವ ಕಾಮನ್‌ವೆಲ್ತ್ ಕಾನ್ಫರೆನ್ಸ್ ಕಾರ್ಯಕ್ರಮದಲ್ಲಿ ಭಾಗವಹಿಸಲು ಸುಮಾರು 21 ದಿನಗಳ ಅಧಿಕೃತ ಪ್ರವಾಸ ಪಟ್ಟಿಯನ್ನು ನನ್ನ ಸಲಹೆಯನ್ನು ಪಡೆಯದೆ ತಾವು ತಯಾರಿಸಿದ್ದು ಅನ್ಯ ಮೂಲಗಳಿಂದ ತಿಳಿದಿರುವುದು ಅತ್ಯಂತ ಖೇಧಕರ ಸಂಗತಿಯಾಗಿದೆ. ನಾನು ಸದರಿ ಅಧಿಕೃತ ಕಾರ್ಯಕ್ರಮದಲ್ಲಿ ಅಧ್ಯಯನ ಪ್ರವಾಸ ಯಾವ ದೇಶಕ್ಕೆ ಹೋಗಬೇಕು ಎಂದು ನಿರ್ಧರಿಸುವ ಹಕ್ಕು ಇಲ್ಲವೆಂದು ಭಾಸವಾಗುತ್ತಿದೆ. ನಿಮಗೆ ಅನುಕೂಲವಾಗುವ ರೀತಿ ಕಾರ್ಯಕ್ರಮವನ್ನು ನಿರೂಪಿಸಿ ಒತ್ತಾಯ ಪೂರ್ವಕವಾಗಿ ನಾನು ಅದರಲ್ಲಿ ಭಾಗವಹಿಸುವಂತೆ ಮಾಡುವ ಸಂದಿಗ್ಧತೆಯ ಅವಶ್ಯಕತೆ ಏನು ಎನ್ನುವುದು ನನಗೆ ಒಗಟಾಗಿದೆ.

ಬಸವರಾಜ ಎಸ್. ಹೊರಟ್ಟಿ
ಸಭಾಪತಿ
ಕರ್ನಾಟಕ ವಿಧಾನ ಪರಿಷತ್ತು

BASAVARAJA S. HORATTI
Chairman
Karnataka Legislative Council

Off. Tel : 2225 9112
2225 8575 / 2203 3325
Fax : 2225 2068
ಕೊಠಡಿ ಸಂಖ್ಯೆ: 117, ಒಂದನೇ ಮಹಡಿ
ವಿಧಾನ ಸೌಧ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು – 560 001
Room No. 117, 1st Floor, Vidhana Soudha
Dr. B.R. Ambedkar Veedhi
Bengaluru - 560 001
E-mail : chairmanklc.uh@gmail.com



ಮೇಲಿನ ಎಲ್ಲಾ ವಾಸ್ತವ ಘಟನೆಗಳನ್ನು ಸಹಿಸಿಕೊಂಡು ಬಂದಿದ್ದು, ಸದರಿ ಅಂಶಗಳು ಮತ್ತು ಅದರ ಬಗ್ಗೆ ಸಭಾಪತಿ ಹುದ್ದೆಯ ಸ್ಥಾನದಿಂದ ನನ್ನ ಅನಿಸಿಕೆಗಳನ್ನು ಮುಕ್ತವಾಗಿ ತಿಳಿಸಿ ಮುಂದಿನ ದಿನಗಳಲ್ಲಿ ಸದರಿ ನ್ಯೂನತೆಗಳು ಮರುಕಳಿಸುವುದಿಲ್ಲ ಎಂಬುವುದು ನನ್ನ ಭಾವನೆಯಾಗಿತ್ತು ಆದರೆ ಅವುಗಳು ಮುಂದುವರೆಯುತ್ತಿರುವುದು ಅತ್ಯಂತ ಬೇಸರದ ವಿಷಯ ಎನ್ನುವುದು ತಮ್ಮ ಗಮನಕ್ಕೆ ತಿಳಿಸುತ್ತಾ ಮುಂದಿನ ದಿನಗಳಲ್ಲಿ ಸದರಿ ನ್ಯೂನತೆಗಳು ಮರುಕಳಿಸುವುದಿಲ್ಲ ಎಂದು ಭಾವಿಸುತ್ತೇನೆ.

ವಂದನೆಗಳೊಂದಿಗೆ,

(ಬಸವರಾಜ ಎಸ್. ಹೊರಟ್ಟಿ)
ಸಭಾಪತಿ
ಕರ್ನಾಟಕ ವಿಧಾನ ಪರಿಷತ್ತು

ರವರಿಗೆ,
ಮಾನ್ಯ ಸಭಾಧ್ಯಕ್ಷರು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.